# ಎಲ್ಲಾ ಶಾಲೆಗಳಿಗೂ ಅನುದಾನಕ್ಕೆ ಸಲಹೆ

ಬೆಂಗಳೂರು: ರಾಜ್ಯದಲ್ಲಿ ಕನ್ನಡ ಕಲಿಸುವ ಅನುದಾನ ರಹಿತ ಶಾಲೆಗಳಿಗೂ ಶಾಸಕರ ಪ್ರದೇಶಾಭಿವೃದ್ಧಿ ಅನುದಾನ ಒದಗಿಸಲು ಸರ್ಕಾರ ಸೂಕ್ತ ಕ್ರಮ ತೆಗೆದುಕೊಳ್ಳಬೇಕು ಎಂದು ಸಭಾಪತಿ ಬಸವರಾಜ ಹೊರಟ್ಟಿ ಸರ್ಕಾರಕ್ಕೆ ಸಲಹೆ ನೀಡಿದ್ದಾರೆ.

ಈ ಕುರಿತು ತೋಟಗಾರಿಕೆ ಹಾಗೂ ಯೋಜನೆ ಮತ್ತು ಸಾಂಖ್ಯಿಕ ಸಚಿವ ಮುನಿರತ್ನ ಅವರಿಗೆ ಪತ್ರ ಬರೆದಿರುವ ಅವರು, 2014ಕ್ಕಿಂತ ಮೊದಲು ರಾಜ್ಯದ ಶಿಕ್ಷಣ ವ್ಯವಸ್ಥೆಗೆ ತನ್ನದೇ ಆದ ಕೊಡುಗೆಯನ್ನು ನೀಡುವುದರಲ್ಲಿ ಅಪಾರ ಬಂಡವಾಳ ಹೂಡಿ ಶಿಕ್ಷಣ ಪ್ರಸಾರ ಮಾಡುತ್ತಿರುವ ಅನುದಾನರಹಿತ ಶಿಕ್ಷಣ ಸಂಸ್ಥೆಗಳಿಗೂ ಕರ್ನಾಟಕ ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿ ಯೋಜನೆಯಡಿ ಅನುದಾನ ಒದಗಿಸಲು ಅವಕಾಶವಿತ್ತು.

ಈಗ ಈ ಅವಕಾಶವನ್ನು ಹಿಂಪಡೆದಿದ್ದರಿಂದ ಹಲವಾರು ಅನುದಾನರಹಿತ ಶಿಕ್ಷಣ ಸಂಸ್ಥೆಗಳು ತೀವ್ರವಾದ ಮೂಲಭೂತ ಸೌಕರ್ಯಗಳ ಕೊರತೆ ಅನುಭವಿಸುತ್ತಿರುವುದನ್ನು ಸ್ವತಃ ಮನಗಂಡಿದ್ದೇನೆ. ಕನ್ನಡ ಭಾಷೆಯ ಕಲಿಕೆಗೆ ಸಂಪೂರ್ಣವಾಗಿ ಸರಕಾರದೊಂದಿಗೆ ಕೈಜೋಡಿಸಿ ವಿದ್ಯಾದಾನ ಮಾಡುತ್ತಿರುವ ಅನುದಾನರಹಿತ ಶಿಕ್ಷಣ ಸಂಸ್ಥೆಗಳಿಗೂ ಕರ್ನಾಟಕ ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿ ಯೋಜನೆಯಡಿ ಅನುದಾನ ಒದಗಿಸಲು ಮೇ 2014ರ ಮಾರ್ಗಸೂಚಿಗಳಿಗೆ ಬದಲಾವಣೆ ತರುವುದು ತುರ್ತು ಅಗತ್ಯವಾಗಿದೆ ಎಂಬುದು ನನ್ನ ಭಾವನೆ. ಕೂಡಲೇ ತಿದ್ದುಪಡಿ ಆದೇಶ ಹೊರಡಿಸುವಂತೆ ಪತ್ರದಲ್ಲಿ ಕೋರಿದ್ದಾರೆ.

ಅನುದಾನಿತ ಶಿಕ್ಷಣ ಸಂಸ್ಥೆಗಳಿಗೆ ಸರ್ಕಾರದ ಎಲ್ಲ ರೀತಿಯ ಸೌಲಭ್ಯಗಳು ಸಿಗುತ್ತಿವೆ. ಆದರೆ, ಕನ್ನಡದಲ್ಲಿ ಶಿಕ್ಷಣ ನೀಡುತ್ತಿರುವ ಅನುದಾನ ರಹಿತ ಶಿಕ್ಷಣ ಸಂಸ್ಥೆಗಳಿಗೆ ಶಾಸಕರ ಅನುದಾನ ಲಭ್ಯವಾಗುತ್ತಿಲ್ಲ. ಈ ಬಗ್ಗೆ ಸೂಕ್ತ ಕ್ರಮ ತೆಗೆದುಕೊಳ್ಳಬೇಕು ಎಂದು ಸಭಾಪತಿಗಳು ಸಚಿವರಿಗೆ ಪತ್ರ ಬರೆದು ಕೋರಿದ್ದಾರೆ.

ಸಂಯುಕ್ತ ಕರ್ನಾಟಕ Fri, 21 January 2022
epaper.samyukthakarnataka.com/c/65734536

# ಧಾರವಾಡ

ಕನ್ನಡ ಭಾಷೆಯ ಕಲಿಕೆಗೆ ಸರಕಾರದೊಂದಿಗೆ ಕೈಜೋಡಿಸಿ ವಿದ್ಯಾದಾನ ಮಾಡುತ್ತಿರುವ ಅನುದಾನರಹಿತ ಶಿಕ್ಷಣ ಸಂಸ್ಥೆಗಳಿಗೂ, ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿ ಯೋಜನೆಯಡಿ ಅನುದಾನ ಒದಗಿಸಲು ಮೇ 2014ರ ಮಾರ್ಗಸೂಚಿಗಳಿಗೆ ಬದಲಾವಣೆ ತರುವದು ತುರ್ತು ಅಗತ್ಯವಾಗಿದೆ.

■ ಬಸವರಾಜ ಹೊರಟ್ಟಿ, ವಿಧಾನ ಪರಿಷತ್ ಸಭಾಪತಿ.



## ಸುದ್ದಿ ಮಿಂಚು

### ಮಡಿವಾಳ ಸಮಾಜ ನಿಗಮಕ್ಕೆ ಅಧ್ಯಕ್ಷರ ನೇಮಕಕ್ಕೆ ಆಗ್ರಹ

## ಜಿಲ್ಲಾ ಆಸ್ಪತ್ರೆ, ಇಎಸ್‌ಐ, ಕಿಮ್ಸ್ ಸೇರಿ 8 ಆ

# ಕೋವಿಡ್ ಕೇರ್ ಸೆಂಟರ್‌ಗ